# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ – ೩<br>Part – III | ಬೆಂಗಳೂರು, ಶನಿವಾರ, ೧೭, ಜನವರಿ, ೨೦೨೬(ಪುಷ್ಯ, ೨೭, ಶಕವರ್ಷ, ೧೯೪೭)<br>BENGALURU, SATURDAY, 17, JANUARY, 2026(PUSHYA , 27, SHAKAVARSHA, 1947) | ನಂ. ೭೩<br>No. 73 |
|---|---|---|

**ಕರ್ನಾಟಕ ಸರ್ಕಾರ**

**ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗ**

**ನಂ.204, 2ನೇ ಮಹಡಿ, 3ನೇ ಗೇಟ್,**
**ಬಹುಮಹಡಿಗಳ ಕಟ್ಟಡ,**
**ಬೆಂಗಳೂರು-560001**

ಸಂಖ್ಯೆ: ಕಪಂರಾಸೀನಿಆ/84/ಪ್ರಾ.ಗ.ನಿ/2023 ದಿನಾಂಕ:17-01-2026

## ಪ್ರಕಟಣೆ

**ಕಲಬುರಗಿ ಜಿಲ್ಲೆಯ ಸೇಡಂ ತಾಲ್ಲೂಕಿನ ತಾಲ್ಲೂಕು ಪಂಚಾಯಿತಿ ಚುನಾಯಿತ ಸದಸ್ಯರ ಸಂಖ್ಯೆ ನಿಗದಿ ಹಾಗೂ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳ ಸೀಮಾ/ಗಡಿ ನಿರ್ಣಯ ಕುರಿತು.**

ನಗರಾಭಿವೃದ್ಧಿ ಇಲಾಖೆಯು, ಕಲಬುರಗಿ ಜಿಲ್ಲೆಯ, ಸೇಡಂ ತಾಲ್ಲೂಕಿನ ಕೆಲವು ಗ್ರಾಮೀಣ ಪ್ರದೇಶಗಳನ್ನು ನಗರ ಸಂಸ್ಥೆಗಳನ್ನಾಗಿ ಪರಿವರ್ತಿಸಿ ಅಧಿಸೂಚನೆಯನ್ನು ಹೊರಡಿಸಿರುತ್ತದೆ. ಈ ಹಿನ್ನೆಲೆಯಲ್ಲಿ, ಈಗಾಗಲೇ ದಿನಾಂಕ:16-12-2023ರಲ್ಲಿ ಅಧಿಸೂಚಿಸಿ ಹೊರಡಿಸಿರುವ ಸೇಡಂ ತಾಲ್ಲೂಕಿನ, ತಾಲ್ಲೂಕು ಪಂಚಾಯಿತಿ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳ ವ್ಯಾಪ್ತಿಯಿಂದ ಪರಿವರ್ತನೆಗೊಂಡಿರುವ ಗ್ರಾಮೀಣ ಪ್ರದೇಶಗಳನ್ನು ಕೈಬಿಡಬೇಕಾಗಿರುತ್ತದೆ. ಆದ್ದರಿಂದ, ಸರ್ಕಾರವು, ದಿನಾಂಕ:06-01-2026ರ ಕರ್ನಾಟಕ ರಾಜ್ಯ ಪತ್ರದಲ್ಲಿ ಸೇಡಂ ತಾಲ್ಲೂಕಿನ ಚುನಾಯಿತ ಸದಸ್ಯರ ಸಂಖ್ಯೆ ಹಾಗೂ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳ ಸೀಮಾ/ಗಡಿ ನಿರ್ಣಯವನ್ನು ಹಿಂಪಡೆದಿರುತ್ತದೆ. ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವು ಸೇಡಂ ತಾಲ್ಲೂಕಿನ ಪರಿಷ್ಕೃತ ಸದಸ್ಯರ ಸಂಖ್ಯೆಯನ್ನು ಹಾಗೂ ಸೀಮಾ/ಗಡಿಗಳನ್ನು ನಿಯಮಾನುಸಾರ ರಚಿಸಬೇಕಾಗಿರುತ್ತದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 121, 122 ಮತ್ತು 124 ರನ್ವಯ ಹಾಗೂ 308(ಎಫ್) ರ ಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವು ಕಲಬುರಗಿ ಜಿಲ್ಲೆಯ, ಸೇಡಂ ತಾಲ್ಲೂಕಿನ ತಾಲ್ಲೂಕು ಪಂಚಾಯತಿ ಚುನಾಯಿತ ಸದಸ್ಯರ ಸಂಖ್ಯೆಯನ್ನು ಕೋಷ್ಠಕ **'ಅ'** ದಲ್ಲಿರುವಂತೆ ನಿಗದಿಪಡಿಸಿದೆ. **'ಅ'** ಕೋಷ್ಠಕದ 2ನೇ ಅಂಕಣದಲ್ಲಿರುವ ತಾಲ್ಲೂಕಿನಿಂದ ಆಯ್ಕೆಯಾಗುವ ತಾಲ್ಲೂಕು ಪಂಚಾಯತಿ ಚುನಾಯಿತ ಸದಸ್ಯರ ಸಂಖ್ಯೆಯನ್ನು 3ನೇ ಅಂಕಣದಲ್ಲಿ ನಿಗದಿಪಡಿಸಿದೆ.

ಕಲಬುರಗಿ ಜಿಲ್ಲೆಯ, ಸೇಡಂ ತಾಲ್ಲೂಕಿನ ತಾಲ್ಲೂಕು ಪಂಚಾಯತಿ ವ್ಯಾಪ್ತಿಯೊಳಗಿರುವ ಪ್ರದೇಶಗಳನ್ನು **18** ಏಕ ಸದಸ್ಯ ತಾಲ್ಲೂಕು ಪಂಚಾಯಿತಿ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳನ್ನಾಗಿ ವಿಂಗಡಿಸಿ ಅವುಗಳ ಸೀಮಾ/ಗಡಿಯನ್ನು ಕೋಷ್ಠಕ **'ಆ'** ದಲ್ಲಿರುವಂತೆ ನಿರ್ಣಯಿಸಿದೆ. **'ಆ'** ಕೋಷ್ಟಕದ 2 ನೇ ಅಂಕಣದಲ್ಲಿ ಪ್ರತಿಯೊಂದು ತಾಲ್ಲೂಕು ಪಂಚಾಯತಿಯ ಪ್ರಾದೇಶಿಕ ಚುನಾವಣಾ ಕ್ಷೇತ್ರದ ಸಂಖ್ಯೆ ಹಾಗೂ ಹೆಸರನ್ನು ಮತ್ತು ಕೋಷ್ಠಕದ 3 ನೇ ಅಂಕಣದಲ್ಲಿ

ನಮೂದಿಸಿರುವ ಗ್ರಾಮಗಳನ್ನೊಳಗೊಂಡ ಪ್ರದೇಶವನ್ನು ಆ ಪ್ರಾದೇಶಿಕ ಚುನಾವಣಾ ಕ್ಷೇತ್ರದ ವ್ಯಾಪ್ತಿಯೆಂದು ನಿಗದಿಪಡಿಸಿದೆ.

ಕಲಬುರಗಿ ಜಿಲ್ಲೆಯ, ಸೇಡಂ ತಾಲ್ಲೂಕಿನ ತಾಲ್ಲೂಕು ಪಂಚಾಯತಿ ಚುನಾಯಿತ ಸದಸ್ಯರ ಸಂಖ್ಯೆ ಹಾಗೂ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳ ವ್ಯಾಪ್ತಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳಿದ್ದಲ್ಲಿ, ಪ್ರಕಟಣೆಯ ದಿನಾಂಕದಿಂದ 7 (ಏಳು) ದಿವಸಗಳ ಒಳಗಾಗಿ **ಅಂದರೆ ದಿನಾಂಕ:23-01-2026 ಸಂಜೆ 5.00 ಗಂಟೆಯ ಒಳಗೆ** ಸಲ್ಲಿಸಲು ತಿಳಿಸಿದೆ. ಆಕ್ಷೇಪಣೆಗಳನ್ನು ಆನ್‌ಲೈನ್ ಮೂಲಕ ಹಾಗೂ ಖುದ್ದಾಗಿ/ಅಂಚೆಯ ಮೂಲಕ ಈ ಕೆಳಕಂಡ ವಿಳಾಸಕ್ಕೆ ಸಲ್ಲಿಸತಕ್ಕದ್ದು. ಅಂಚೆಯ ಮೂಲಕ ಸಲ್ಲಿಸಿದಾಗಲೂ, ಆಯೋಗವು ನಮೂದಿಸಿದ ದಿನಾಂಕದೊಳಗೆ ಸಲ್ಲಿಸತಕ್ಕದ್ದು. ನಂತರ ಸ್ವೀಕೃತವಾದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಹಾಗೂ ಅಂಚೆ ಇಲಾಖೆಯ ವಿಳಂಬಕ್ಕೆ ಆಯೋಗವು ಜವಾಬ್ದಾರರಾಗಿರುವುದಿಲ್ಲ ಎಂದು ಈ ಮೂಲಕ ತಿಳಿಸಿದೆ.

**(ಅ) ಆನ್ ಲೈನ್ ಮೂಲಕ:**

**ವೆಬ್ ಸೈಟ್ ವಿಳಾಸ: "https://rdpr.karnataka.gov.in/rdc/public/"** ಸದರಿ ವೆಬ್‌ಸೈಟ್‌ನ ಮುಖಪುಟದ ಎಡಭಾಗದಲ್ಲಿರುವ ಸಾರ್ವಜನಿಕ ಸಲಹೆಗಳು ಎಂಬ ಶೀರ್ಷಿಕೆಯನ್ನು CLICK ಮಾಡಿ ತಮ್ಮ ಆಕ್ಷೇಪಣೆಗಳನ್ನು ಆನ್‌ಲೈನ್ ನಲ್ಲಿ ಸಲ್ಲಿಸಬಹುದು.

**(ಆ) ಖುದ್ದಾಗಿ/ಅಂಚೆ ಮೂಲಕ:**

ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗ.
3ನೇ ಗೇಟ್, 2ನೇ ಮಹಡಿ, ಕೊಠಡಿ ಸಂಖ್ಯೆ: 222/A, ಬಹುಮಹಡಿ ಕಟ್ಟಡ,
ಅಂಬೇಡ್ಕರ್ ವೀಧಿ, ಬೆಂಗಳೂರು-560001

**ಕೋಷ್ಟಕ 'ಅ'**

| ಕಲಬುರಗಿ ಜಿಲ್ಲೆ | | |
|---|---|---|
| ಕ್ರ. ಸಂ. | ತಾಲ್ಲೂಕು ಪಂಚಾಯತಿಯ ಹೆಸರು | ತಾಲ್ಲೂಕು ಪಂಚಾಯತಿಯ ಸದಸ್ಯರ ಸಂಖ್ಯೆ |
| 1 | 2 | 3 |
| | ಸೇಡಂ | 18 |

**ಕೋಷ್ಟಕ 'ಆ'**

| ಕಲಬುರಗಿ ಜಿಲ್ಲೆ | | |
|---|---|---|
| ಕ್ರ ಸಂ | ತಾಲ್ಲೂಕು ಪಂಚಾಯತಿ ಪ್ರಾದೇಶಿಕ ಚುನಾವಣಾ ಕ್ಷೇತ್ರದ ಸಂಖ್ಯೆ ಮತ್ತು ಹೆಸರು | ತಾಲ್ಲೂಕು ಪಂಚಾಯತಿ ಪ್ರಾದೇಶಿಕ ಚುನಾವಣಾ ಕ್ಷೇತ್ರದ ವ್ಯಾಪ್ತಿಯಲ್ಲಿನ ಗ್ರಾಮಗಳ ಹೆಸರು |
| 1 | 2 | 3 |
| ಸೇಡಂ ತಾಲ್ಲೂಕು ಪಂಚಾಯಿತಿ | | |
| 1 | 01-ಮಳಖೇಡ | ಮಳಖೇಡ ಜೆ, ಮಳಖೇಡ ಕೆ, ಸಮಖೇಡ. |
| 2 | 02-ಕುಕ್ಕುಂದಾ | ಕುಕ್ಕುಂದಾ, ಮೀನಹಾಬಳ, ಬೀರನಳ್ಳಿ, ತೋಟ್ನಳ್ಳಿ, ಹುಣಸನಹಳ್ಳಿ, ಬೀಜನಳ್ಳಿ, ಸಂಗಾವಿ (ಎಂ), ಅರೇಬೊಮ್ಮನಹಳ್ಳಿ. |
| 3 | 03-ತೇಲ್ಕೂರ | ತೇಲ್ಕೂರ, ಸಂಗಾವಿ (ಟಿ), ಲೋಹಾಡ, ಸೂರವಾರ, ಹಾಬಳ ಟಿ, ಯಡ್ಡಳ್ಳಿ, ಯಡಗಾ, ಬಿಬ್ಬಳ್ಳಿ, ಕಾಚೂರ, ತರನಳ್ಳಿ, ಮುಗನೂರ, ಸಟಪಟನಹಳ್ಳಿ. |
| 4 | 04-ನೃಪತುಂಗ ನಗರ | ನೀಲಹಳ್ಳಿ, ಹೊಸಳ್ಳಿ, ಕೊಂಕನಳ್ಳಿ, ನೃಪತುಂಗ ನಗರ, ರಾಜೀವ ನಗರ, ಭೀಮನಗರ. |
| 5 | 05-ಆಡಕಿ | ಆಡಕಿ, ಜವಾಹಾರ ನಗರ, ಮದಕಲ್, ಇಂಜೇಪಲ್ಲಿ, ಕೊಂತನಪಲ್ಲಿ, ಸೋಮಪಲ್ಲಿ. |
| 6 | 06-ಜಾಕನಪಲ್ಲಿ | ಜಾಕನಪಲ್ಲಿ, ರುದ್ರವಾರ, ಮುನಕನಪಲ್ಲಿ, ಕಡಚರ್ಲಾ,ಜಿಲ್ಲೇಡಪಲ್ಲಿ, ಬೀದರಚೇಡ, ಗೋಪನಪಲ್ಲಿ (ಕೆ), ಇಮಾಡಾಪೂರ, ಮದರ ನಾಗಸನಪಲ್ಲಿ. |

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



| ಕಲಬುರಗಿ ಜಿಲ್ಲೆ | | |
|---|---|---|
| ಕ್ರ ಸಂ | ತಾಲ್ಲೂಕು ಪಂಚಾಯತಿ ಪ್ರಾದೇಶಿಕ ಚುನಾವಣಾ ಕ್ಷೇತ್ರದ ಸಂಖ್ಯೆ ಮತ್ತು ಹೆಸರು | ತಾಲ್ಲೂಕು ಪಂಚಾಯತಿ ಪ್ರಾದೇಶಿಕ ಚುನಾವಣಾ ಕ್ಷೇತ್ರದ ವ್ಯಾಪ್ತಿಯಲ್ಲಿನ ಗ್ರಾಮಗಳ ಹೆಸರು |
| 1 | 2 | 3 |
| **7** | 07-ಕುರಕುಂಟಾ | ಕುರಕುಂಟಾ, ಹಯ್ಯಾಳ. |
| **8** | 08-ಮದನಾ | ಮದನಾ, ಕಡತಾಲ, ಕೋನಾಪೂರ, ರಾಘಪೂರ. |
| **9** | 09-ಕೋಡ್ಲಾ | ಕೋಡ್ಲಾ, ಸಿಂಧನಮಡು, ಹಣಮನಹಳ್ಳಿ, ಗೌಡನಳ್ಳಿ. |
| **10** | 10-ರಂಜೋಳ | ರಂಜೋಳ ಮಾಧವಾರ, ಚಿಟಕನಪಲ್ಲಿ, ಅಮರವಾದಿ, ಹಾಳಹಣಮನಹಳ್ಳಿ, ಭೂತಪೂರ, ಗುಂಡಳ್ಳಿ ಬಿ, ಕಾಚವಾರ, ತುರ್ಕಬೊಮ್ಮನಳ್ಳಿ, ತುರನೂರ, ರಂಗವಾರ. |
| **11** | 11-ಊಡಗಿ | ಊಡಗಿ, ಹಂಗನಹಳ್ಳಿ, ಕಲಕಂಭ, ಅಳ್ಳೋಳ್ಳಿ, ಬೆನಕನಳ್ಳಿ, ಮುಷ್ಠಳ್ಳಿ, ಮೈಲವಾರ, ನಾಮವಾರ. |
| **12** | 12-ಮುಧೋಳ | ಮುಧೋಳ, ಕೊಂಪಲ್ಲಿ ಜೆ. |
| **13** | 13-ಕಾನಾಗಡ್ಡಾ | ಕಾನಾಗಡ್ಡಾ, ಗಂಗಾರಾವಲಪಲ್ಲಿ, ತೋಲಮಾಮಡಿ, ಯಾನಾಗುಂದಿ, ಚಂದಾಪೂರ, ಪಾಕಾಲ, ಕಿಷ್ಟಾಪೂರ. |
| **14** | 14-ಮೇದಕ | ಮೇದಕ, ಶಿಲಾರಕೋಟ, ಗಜಲಾಪೂರ, ಶಂಕರಾಜಪೂರ, ಶಾಬಾಜಪೂರ, ನಾಡೇಪಲ್ಲಿ, ಕದ್ಲಾಪೂರ, ಬನ್ನೂರ (ಜಿ). |
| **15** | 15-ರಿಬ್ಬನಪಲ್ಲಿ | ರಿಬ್ಬನಪಲ್ಲಿ, ಖಂಡೇರಾಯನಪಲ್ಲಿ, ಮಲ್ಲಾಬಾದ, ಅನಂತಪೂರ, ಲಿಂಗಂಪಲ್ಲಿ, ಬೊಂದೆಪಲ್ಲಿ, ಈರ್ನಾಪಲ್ಲಿ, ಗುಂಡೇಪಲ್ಲಿ (ಕೆ), ಇಂದಿರಾ ನಗರ, ರಾಜೋಳ (ಕೆ). |
| **16** | 16-ಕೋಲಕುಂದಾ | ಕೋಲಕುಂದಾ, ಮಲ್ಕಾಪಲ್ಲಿ, ಗಾಡದನ್ನಾ, ವೆಂಕಟಾಪೂರ, ದುಗನೂರ. |
| **17** | 17-ಹಂದರಕಿ | ಹಂದರಕಿ, ಹುಳಗೋಳ, ದೇವನೂರ, ಬಿಲಕಲ, ನಾಚವಾರ. |
| **18** | 18-ಇಟಕಾಲ | ಇಟಕಾಲ, ಬುರಗಪಲ್ಲಿ, ಮೋತಕಪಲ್ಲಿ, ಶಕಲಾಸಪಲ್ಲಿ, ಗುಂತಾತಿಪಡಂಪಲ್ಲಿ, ನರೇಡ್ಲಾಪಾಡ. |

**ವಿಶೇಷ ಸೂಚನೆ:-**

**ಕಲಬುರಗಿ ಜಿಲ್ಲೆಯ ಸೇಡಂ ತಾಲ್ಲೂಕಿನ ತಾಲ್ಲೂಕು ಪಂಚಾಯಿತಿ ಕ್ಷೇತ್ರಗಳ ಚುನಾಯಿತ ಸದಸ್ಯರ ಸಂಖ್ಯೆ ಮತ್ತು ಪ್ರಾದೇಶಿಕ ಚುನಾವಣಾ ಕ್ಷೇತ್ರಗಳ ಸೀಮಾ/ಗಡಿ ನಿರ್ಣಯ ಕುರಿತಂತೆ, ದಿನಾಂಕ:23-01-2026ರ ಒಳಗಾಗಿ ಸಲ್ಲಿಸಲ್ಪಟ್ಟ ಆಕ್ಷೇಪಣೆ/ಅಹವಾಲುಗಳ ಪರಿಶೀಲನಾ ಅದಾಲತ್ ಅನ್ನು ದಿನಾಂಕ:27-01-2026 ರಂದು ಬೆಳಿಗ್ಗೆ10:30 ರಿಂದ ಮಧ್ಯಾಹ್ನ 1:30 ರವರೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಗೇಟ್-ನಂ-2, 2ನೇ ಮಹಡಿ, ಕೊಠಡಿ ಸಂಖ್ಯೆ:229, 230 ಬಹುಮಹಡಿಗಳ ಕಟ್ಟಡ, ಬೆಂಗಳೂರು-560001 ಇಲ್ಲಿ ನಡೆಸಲಾಗುವುದು. ಆಕ್ಷೇಪಣೆ ಮತು ಅಹವಾಲುಗಳನ್ನು ಸಲ್ಲಿಸಿರುವವರು ಅದಾಲತ್ ನಲ್ಲಿ ಭಾಗವಹಿಸಲು ಇಚ್ಛಿಸಿದಲ್ಲಿ, ಸರ್ಕಾರದಿಂದ ನೀಡಿರುವ ಭಾವಚಿತ್ರವುಳ್ಳ ಗುರುತಿನ ಚೀಟಿಯ ಮೂಲ ಪ್ರತಿಯನ್ನು ತಮ್ಮೊಂದಿಗೆ ಕಡ್ಡಾಯವಾಗಿ ತರತಕ್ಕದ್ದು.**

**(ಡಾ||ಎನ್. ನೋಮೇಶ್ ಕುಮಾರ್)**
ನಿರ್ದೇಶಕರು (ಪಂ. ರಾಜ್) ಮತ್ತು
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಹಾಗೂ ಸದಸ್ಯ ಕಾರ್ಯದರ್ಶಿ
ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗ

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH